# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 555 ಗ್ರಾಪಂಅ 2020.

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 16.07.2020

## ಅಧಿಸೂಚನೆ

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 58 (1-ಎ)(1)(vii) ರಲ್ಲಿ ಗ್ರಾಮ ಪಂಚಾಯಿತಿಗಳು ಜನನ ಮತ್ತು ಮರಣಗಳ ತ್ವರಿತ ನೋಂದಣಿ ಮತ್ತು ಅದನ್ನು ವರದಿ ಮಾಡುವುದನ್ನು ಖಚಿತಪಡಿಸಿಕೊಳ್ಳುವ ಕರ್ತವ್ಯ ಹೊಂದಿರುವುದರಿಂದ,

ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳವರ ಅರೆ ಸರ್ಕಾರಿ ಪತ್ರದ ಸಂಖ್ಯೆ: ಇಸಾಸಿ 30 ಜಮಸೋ 2020, ದಿನಾಂಕ:24.06.2020ರ ಪತ್ರದಲ್ಲಿ, ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು (ಪಿಡಿಓ) ಜನನ ಮರಣ ಪ್ರಮಾಣ ಪತ್ರಗಳ ವಿತರಣಾಧಿಕಾರಿಯನ್ನಾಗಿ ನೇಮಿಸಬಹುದಾಗಿದೆ ಎಂದು ತಿಳಿಸಿರುವುದರಿಂದ ಹಾಗೂ ಸದರಿ ಪತ್ರದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಜನನ ಮರಣ ಪ್ರಮಾಣ ಪತ್ರಗಳ ವಿತರಣಾಧಿಕಾರಿಗಳನ್ನಾಗಿ ನೇಮಿಸಲು ಅನುಮತಿ ನೀಡಿರುವುದರಿಂದ,

ರಾಷ್ಟ್ರೀಯ ಜನನ ಮರಣ ಕಾಯ್ದೆ 1969ರ ಅಧ್ಯಾಯ 5 ರ ಪ್ರಕರಣ 27 ರಡಿ ಗ್ರಾಮ ಪಂಚಾಯಿತಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಇ-ಜನ್ಮ ತಂತ್ರಾಂಶದಲ್ಲಿ ತಮ್ಮ ಡಿಜಿಟಲ್ ಸಹಿಯ ಮುಖಾಂತರ ವ್ಯಕ್ತಿಗಳ ಜನನ ಮತ್ತು ಮರಣ ಪ್ರಮಾಣ ಪತ್ರಗಳ ವಿತರಣಾಧಿಕಾರಿಗಳನ್ನಾಗಿ ತತಕ್ಷಣದಿಂದ ಜಾರಿಗೆ ಬರುವಂತೆ ಸರ್ಕಾರವು ನೇಮಿಸಿ ಆದೇಶಿಸಿದೆ.

ಗ್ರಾಮ ಪಂಚಾಯಿತಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಬಾಪೂಜಿ ಸೇವಾ ಕೇಂದ್ರಗಳ ಮುಖಾಂತರ ಈ ಸೇವೆಯನ್ನು ನೀಡುವುದು. ಸರ್ಕಾರವು ಆಗಿಂದಾಗ್ಗೆ ನಿಗಧಿಪಡಿಸುವ ದರಗಳನ್ವಯ ಸೇವಾ ಶುಲ್ಕವನ್ನು ಸಂಗ್ರಹಿಸಿ ಸಂಬಂಧಿಸಿದ ಲೆಕ್ಕ ಶೀರ್ಷಿಕೆಗೆ ಜಮಾ ಮಾಡುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

16/07/2020
([illegible])
ಸರ್ಕಾರದ ಅಧೀನ ಕಾರ್ಯದರ್ಶಿ (ಜಿ.ಪಂ.)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

16/7/2020

ಇವರಿಗೆ:

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
3. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳ ಆಡಳಿತಾಧಿಕಾರಿಗಳು ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು.
4. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5. ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
6. ಹೆಚ್ಚುವರಿ ಪ್ರತಿ/ ಶಾಖಾ ರಕ್ಷಾ ಕಡತ.

ಮಾಹಿತಿಗಾಗಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು.
2. ಅಪರ ಮುಖ್ಯ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾ.ಅ. & ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.

**ಡಾ. ಶಾಲಿನಿ ರಜನೀಶ್,** ಭಾ.ಆ.ಸೇ.,
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ
ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು
ಸಾಂಖ್ಯಿಕ ಇಲಾಖೆ

**ಕರ್ನಾಟಕ ಸರ್ಕಾರ**

ಕರ್ನಾಟಕ ಸರ್ಕಾರದ ಸಚಿವಾಲಯ
ಕೊಠಡಿ ಸಂಖ್ಯೆ: 701, 7ನೇ ಮಹಡಿ
3ನೇ ಹಂತ, ಬಹುಮಹಡಿಗಳ ಕಟ್ಟಡ
ಬೆಂಗಳೂರು – 560 001
ದೂ : 080–22252352, 22032726
ಇ–ಮೇಲ್: prsplanning@gmail.com

**ಅ.ಸ.ಪತ್ರ ಸಂ. ಆಸಾನಿ 30 ಜಮನೋ 2020** **ದಿನಾಂಕ: 24.06.2020**

**ವಿಷಯ:** ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಜನನ ಮರಣ ಪ್ರಮಾಣ ಪತ್ರಗಳ ವಿತರಣಾ ಅಧಿಕಾರಿಗಳನ್ನಾಗಿ ನೇಮಿಸುವ ಬಗ್ಗೆ.

**ಉಲ್ಲೇಖ:** ತಮ್ಮ ಕಛೇರಿ ಅ.ಸ.ಪತ್ರ ಸಂ.ಗ್ರಾಅಪಂರಾ ಪ್ರಕಾ ಆಶಾ 05 2020,ದಿನಾಂಕ: 06.06.2020

***

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಜನನ ಮತ್ತು ಮರಣ ನೋಂದಣಿ ಅಧಿನಿಯಮ 1969ರನ್ವಯ ಜನನ ಮತ್ತು ಮರಣ ಪ್ರಮಾಣ ಪತ್ರಗಳನ್ನು ಗ್ರಾಮ ಪಂಚಾಯಿತಿ ಹಂತದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರನ್ನು ಜನನ ಮರಣಗಳ ನೋಂದಣಿ ಮಾಡಲು ಆದೇಶ ಹೊರಡಿಸಲು ಕ್ರಮ ಕೈಗೊಳ್ಳುವಂತೆ ಉಲ್ಲೇಖಿತ ಪತ್ರದಲ್ಲಿ ಕೋರಿರುತ್ತೀರಿ.

ಆದರೆ, ಸದರಿ ವಿಷಯಕ್ಕೆ ಸಂಬಂಧಿಸಿದಂತೆ, ಈ ಹಿಂದೆ ನಡೆಸಲಾಗಿರುವ ಸಭಾ ನಡವಳಿಗಳನ್ನು ಪರಿಶೀಲಿಸಲಾಗಿದ್ದು, ಗ್ರಾಮೀಣ ಪ್ರದೇಶದ ತಳ ಹಂತದಲ್ಲಿ ಗ್ರಾಮ ಲೆಕ್ಕಾಧಿಕಾರಿಗಳು ಜನನ–ಮರಣ ನೋಂದಣಾಧಿಕಾರಿಗಳಾಗಿದ್ದು, ಇ–ಜನ್ಮ ತಂತ್ರಾಂಶದಲ್ಲಿ ಜನನ, ಮರಣ ನೋಂದಣಿ ಮತ್ತು ಪ್ರಮಾಣ ಪತ್ರಗಳ ವಿತರಣಾ ಕಾರ್ಯವು ಜಾರಿಯಲ್ಲಿದೆ. ಆದ್ದರಿಂದ, ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು (ಪಿಡಿಓ) ಜನನ, ಮರಣ ಪ್ರಮಾಣ ಪತ್ರಗಳ ವಿತರಣಾ ಅಧಿಕಾರಿಯನ್ನಾಗಿ ನೇಮಿಸಬಹುದಾಗಿದೆ.

ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಚಾಲ್ತಿಯಲ್ಲಿರುವ ಬಾಪೂಜಿ ಸೇವಾ ಕೇಂದ್ರಗಳಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು (ಪಿಡಿಓ) ಜನನ, ಮರಣ ಪ್ರಮಾಣ ಪತ್ರಗಳ ವಿತರಣಾ ಕಾರ್ಯವನ್ನು ನಿರ್ವಹಿಸಲು ಬಾಪೂಜಿ ಸೇವಾ ಕೇಂದ್ರಕ್ಕೆ ಇ–ಜನ್ಮ ತಂತ್ರಾಂಶವನ್ನು ಸಂಯೋಜನೆ (Integrate) ಮಾಡಲಾಗುವುದು. ಸಾರ್ವಜನಿಕರಿಗೆ ಜನನ ಮರಣ ಪ್ರಮಾಣ ಪತ್ರಗಳು ಗ್ರಾಮ ಪಂಚಾಯಿತಿಯ ಮಟ್ಟದಲ್ಲಿಯೇ ಸುಲಭವಾಗಿ ಲಭ್ಯವಾಗುವ ಹಿತದೃಷ್ಟಿಯಿಂದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಜನನ ಮರಣ ಪ್ರಮಾಣ ಪತ್ರಗಳ ವಿತರಣಾ ಅಧಿಕಾರಿಗಳನ್ನಾಗಿ ನೇಮಿಸಲು ಅನುಮತಿ ನೀಡಲಾಗಿದ್ದು ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ತಮ್ಮ ವ್ಯಾಪ್ತಿಗೆ ಬರುವುದರಿಂದ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಜನನ ಮರಣ ಪ್ರಮಾಣ ಪತ್ರ ವಿತರಣಾ ಅಧಿಕಾರಿಗಳನ್ನಾಗಿ ತಮ್ಮ ಹಂತದಲ್ಲಿ ನೇಮಿಸಿ ಆದೇಶ ಹೊರಡಿಸಿ ಪ್ರತಿಯನ್ನು ಈ ಕಛೇರಿಗೆ ಕಳುಹಿಸಲು ಕೋರಲಾಗಿದೆ.

ತಮ್ಮ ವಿಶ್ವಾಸಿ

ಉಮಾ ಮಹಾದೇವನ್, ಭಾ.ಆ.ಸೇ.,
ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂಚಾಯತ್ ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.